# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೆಂಟನೆಯ ಅಧಿವೇಶನ
(ಮುಂದುವರೆದ ಉಪವೇಶನಗಳು)

**ಕಾರ್ಯಕಲಾಪಗಳ ಪಟ್ಟಿ**
ಸೋಮವಾರ, ದಿನಾಂಕ:16ನೇ ಮಾರ್ಚ್, 2026
**(ಸಮಯ: ಬೆಳಗ್ಗೆ: 11.00 ಗಂಟೆಗೆ)**

*****

## 1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹತ್ತನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹತ್ತನೇ ಪಟ್ಟಿ

## 2. ಶೂನ್ಯವೇಳೆ ಪ್ರಸ್ತಾವಗಳು

## 3. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಎಸ್.ವ್ಹಿ. ಸಂಕನೂರ, ಶ್ರೀ ಪುಟ್ಟಣ್ಣ, ಶ್ರೀ ಎಸ್.ಎಲ್. ಭೋಜೇಗೌಡ ಹಾಗೂ ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್)** ಅವರುಗಳು ರಾಜ್ಯದ ಅನುದಾನಿತ ಶಿಕ್ಷಣ ಸಂಸ್ಥೆಯಲ್ಲಿ 2006ರ ಪೂರ್ವದಲ್ಲಿ ನೇಮಕಗೊಂಡು ನಂತರ ಅನುದಾನಕ್ಕೆ ಒಳಪಟ್ಟಿರುವ ಹಾಗೂ 2006ರ ನಂತರ ನೇಮಕಗೊಂಡ ಸಿಬ್ಬಂದಿಗೆ ಪಿಂಚಣಿ ಸೌಲಭ್ಯ ಸಿಗದೆ ಆರ್ಥಿಕ ಸಂಕಷ್ಟಕ್ಕೆ ಒಳಗಾಗಿರುವ ಬಗ್ಗೆ **ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ** ಸಚಿವರ ಗಮನ ಸೆಳೆಯುವುದು.

2. **ಶ್ರೀ ಬಸನಗೌಡ ಬಾದರ್ಲಿ** ಅವರು ಸಿಂಧನೂರು ಹಾಗೂ ಸುತ್ತಮುತ್ತಲಿನ ತಾಲ್ಲೂಕುಗಳ ರೈತರುಗಳು ಬೆಳೆ ಸಮೀಕ್ಷೆ ಅರ್ಜಿಗಳಲ್ಲಿ ಜೋಳ ಬೆಳೆದಿರುವುದಾಗಿ ತಪ್ಪು ಮಾಹಿತಿಯನ್ನು ನಮೂದಿಸಿ ಜೋಳ ಖರೀದಿ ಕೇಂದ್ರಗಳಲ್ಲಿ ಜೋಳ ಮಾರಾಟಕ್ಕೆ ಹೆಸರುಗಳನ್ನು ನೊಂದಾಯಿಸುತ್ತಿದ್ದು, ಇದರಿಂದಾಗಿ ನೈಜ ಜೋಳ ಬೆಳೆಯುವ ರೈತರು ಸಂಕಷ್ಟಕ್ಕೀಡಾಗಿರುವ ಬಗ್ಗೆ **ಮಾನ್ಯ ಕಂದಾಯ** ಸಚಿವರ ಗಮನ ಸೆಳೆಯುವುದು.

...2

೩. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಬಾಗಲಕೋಟೆ ಜಿಲ್ಲೆ ಜಮಖಂಡಿ ತಾಲ್ಲೂಕಿನ ಕೃಷ್ಣ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಹಿಪ್ಪರಗಿ ಬ್ಯಾರೇಜ್ ಗೇಟ್ ದುರಸ್ಥಿಗೊಂಡು ನೀರು ಪೋಲಾಗುತ್ತಿರುವ ಬಗ್ಗೆ **ಮಾನ್ಯ ಉಪ ಮುಖ್ಯಮಂತ್ರಿಗಳ** ಗಮನ ಸೆಳೆಯುವುದು.

4. **ಶ್ರೀಮತಿ ಬಲ್ಕೀಸ್ ಬಾನು** ಅವರು ರಾಜ್ಯಾದ್ಯಂತ ಹಲವಾರು ವರ್ಷಗಳಿಂದ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಗ್ರೂಪ್ ಸಿ ಮತ್ತು ಡಿ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರನ್ನು ಖಾಯಂಗೊಳಿಸದೆ ಹೊರಗುತ್ತಿಗೆ ಮೂಲಕ ಭರ್ತಿ ಮಾಡುತ್ತಿರುವ ಬಗ್ಗೆ **ಮಾನ್ಯ ಉನ್ನತ ಶಿಕ್ಷಣ** ಸಚಿವರ ಗಮನ ಸೆಳೆಯುವುದು.

5. **ಶ್ರೀ ಎಫ್.ಹೆಚ್. ಜಕ್ಕಪ್ಪನವರ್** ಅವರು ರಾಜ್ಯಾದ್ಯಂತ ಸಂಚಾರಿ ಆರೋಗ್ಯ ಘಟಕಗಳನ್ನು (MHU) ಜಾರಿಗೆ ತರಲು ಬಿಡುಗಡೆಯಾದ ಅನುದಾನವು ಸದ್ಬಳಕೆಯಾಗದೆ ದುರುಪಯೋಗವಾಗುತ್ತಿರುವುದರಿಂದ ಬಡರೋಗಿಗಳು ತುರ್ತು ಚಿಕಿತ್ಸೆಗಾಗಿ ಖಾಸಗಿ ಆಸ್ಪತ್ರೆಗಳನ್ನು ಅವಲಂಬಿಸುತ್ತಿರುವ ಬಗ್ಗೆ **ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ** ಗಮನ ಸೆಳೆಯುವುದು.

೬. **ಡಾ: ಯತೀಂದ್ರ** ಅವರು ಗ್ರಾಮಠಾಣಾ ವ್ಯಾಪ್ತಿಯಲ್ಲಿ ಸ್ಥಳಾವಕಾಶದ ಕೊರತೆಯಿಂದಾಗಿ ವಸತಿ ಯೋಜನೆಯಡಿ ತಮ್ಮ ಕೃಷಿ ಭೂಮಿಯಲ್ಲಿ ಕಟ್ಟಡ ನಿರ್ಮಿಸಿಕೊಂಡ ಫಲಾನುಭವಿಗಳಿಗೆ ಪ್ರತ್ಯೇಕ ವರ್ಗೀಕರಣ ಮಾಡಿ, ಇ-ಸ್ವತ್ತು ಸೃಜಿಸಲು ಅವಕಾಶ ಕಲ್ಪಿಸಿಕೊಡುವ ಬಗ್ಗೆ **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ** ಗಮನ ಸೆಳೆಯುವುದು.

7. **ಶ್ರೀ ಸಿ.ಟಿ. ರವಿ** ಅವರು ವಿವಿಧ ಇಲಾಖೆಗಳಲ್ಲಿ ಕಾಮಗಾರಿಯನ್ನು ನಿರ್ವಹಿಸಿರುವ ಗುತ್ತಿಗೆದಾರರಿಗೆ ಬಾಕಿಯಿರುವ ಹಣವನ್ನು ಬಿಡುಗಡೆ ಮಾಡುವ ಬಗ್ಗೆ **ಮಾನ್ಯ ಮುಖ್ಯಮಂತ್ರಿಗಳ** ಗಮನ ಸೆಳೆಯುವುದು.

## 4. ನಿಯಮ ೩೩೦ರ ಮೇರೆಗೆ

1. **ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಎನ್. ರವಿಕುಮಾರ್, ಮಾನ್ಯ ಶಾಸಕರುಗಳಾದ ಶ್ರೀ ಸಿ.ಟಿ. ರವಿ, ಡಾ: ತಳವಾರ್ ಸಾಬಣ್ಣ, ಶ್ರೀ ಎಸ್.ಎಲ್. ಭೋಜೇಗೌಡ ಹಾಗೂ ಇತರರು** ರಾಜ್ಯ ಸರ್ಕಾರದ ವಿವಿಧ ಇಲಾಖೆಗಳು, ನಿಗಮ/ಮಂಡಳಿಗಳು ಹಾಗೂ ವಿಶ್ವವಿದ್ಯಾಲಯಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡದೇ, ರಾಜ್ಯ ಸರ್ಕಾರವು ವಿಳಂಬ ನೀತಿಯನ್ನು ಅನುಸರಿಸುತ್ತಿರುವ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಮುಖ್ಯಮಂತ್ರಿಗಳು)**

...೩

೨. **ಶ್ರೀಮತಿ ಹೇಮಲತಾ ನಾಯಕ** ಅವರು ಕೊಪ್ಪಳ ನಗರದ ಹುಲಿಕೆರೆಯ ಮೂಲ ಪ್ರದೇಶ ಹಾಗೂ ಸುತ್ತುಮುತ್ತಲಿನ ಬಫರ್ ಜೋನ್ ಪ್ರದೇಶದ ಅತಿಕ್ರಮಣ ತಡೆಗಟ್ಟಲು ಮರುಅಳತೆ ಮಾಡಿಸಿ ನಿಖರ ಗಡಿ ಗುರುತಿಸುವುದು ಮತ್ತು ಅತಿಕ್ರಮಣ ಕುರಿತು ಸಮಗ್ರ ವರದಿ ಸಿದ್ಧಪಡಿಸಿ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸುವ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು)**

೩. **ಡಾ: ತಳವಾರ್ ಸಾಬಣ್ಣ** ಅವರು ರಾಜ್ಯ ಸರ್ಕಾರದ ವಿಶ್ವವಿದ್ಯಾಲಯಗಳು ಮೂಲಭೂತ ಸೌಕರ್ಯಗಳು ಹಾಗೂ ಪ್ರಾಧ್ಯಾಪಕರುಗಳ ಕೊರತೆಯಿಂದಾಗಿ ಗ್ರಾಮೀಣ ಪ್ರದೇಶದ ಬಡ ಯುವಕ/ಯುವತಿಯರಿಗೆ ಗುಣಮಟ್ಟದ ಶಿಕ್ಷಣ ನೀಡುವಲ್ಲಿ ವಿಫಲವಾಗಿರುವ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಉನ್ನತ ಶಿಕ್ಷಣ ಸಚಿವರು)**

4. **ಡಾ: ಕೆ. ಗೋವಿಂದರಾಜ್** ಅವರು ಬೆಂಗಳೂರಿನ ಸುತ್ತಮುತ್ತಲಿನ 110 ಹಳ್ಳಿಗಳ ಸರ್ವತೋಮುಖ ಬೆಳವಣಿಗೆಗೆ ಬಿ.ಬಿ.ಎಂ.ಪಿ ಮತ್ತು ರಾಜ್ಯ ಸರ್ಕಾರ ಅನುದಾನ ಬಿಡುಗಡೆ ಮಾಡಿದ್ದರೂ ಅಭಿವೃದ್ಧಿ ಕಾಮಗಾರಿಗಳು ಕುಂಠಿತವಾಗಿರುವ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಉಪ ಮುಖ್ಯಮಂತ್ರಿಗಳು)**

5. **ಶ್ರೀ ಶಿವಕುಮಾರ್ ಕೆ**. ಅವರು ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ರಾಮಾಪುರ ಮತ್ತು ಸುತ್ತಮುತ್ತ ಗ್ರಾಮಗಳಲ್ಲಿ ಅಂತರ್ಜಲ ಕುಸಿತ ಹಾಗೂ ನೀರಿನಲ್ಲಿ ಫ್ಲೋರೈಡ್ (Flouride) ಅಂಶವು ಮಿತಿಮೀರಿರುವುದರಿಂದ ಸಾರ್ವಜನಿಕರ ಆರೋಗ್ಯದ ಮೇಲೆ ಉಂಟಾಗುತ್ತಿರುವ ಗಂಭೀರ ಪರಿಣಾಮಗಳ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು)**

೬. **ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಎನ್. ರವಿಕುಮಾರ್, ಮಾನ್ಯ ಶಾಸಕರುಗಳಾದ ಶ್ರೀ ಡಿ.ಎಸ್. ಅರುಣ್, ಶ್ರೀ ಕೆ.ಎಸ್. ನವೀನ್ ಹಾಗೂ ಶ್ರೀ ಕೇಶವ ಪ್ರಸಾದ್ ಎಸ್** ಅವರುಗಳು ಕಬ್ಬಿಗೆ ಬೆಲೆ ನಿಗದಿಪಡಿಸಿ ಎಮ್.ಎಸ್.ಪಿ. ದರವನ್ನು ಹೆಚ್ಚಿಸುವುದು ಹಾಗೂ ಸಕ್ಕರೆ ಕಾರ್ಖಾನೆಗಳಿಂದ ಉತ್ಪಾದಿಸುವ ಇಥೆನಾಲ್ ದ್ರವ ಆಯಿಲ್‌ನ್ನು ಕೇಂದ್ರ ಸರ್ಕಾರ ಸಂಪೂರ್ಣವಾಗಿ ಖರೀದಿಸುವುದನ್ನು ಹೊರತುಪಡಿಸುವುದರ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು)**

7. **ಡಾ: ಎಂ.ಜಿ. ಮುಳೆ** ಅವರು ಬೀದರ್ ಜಿಲ್ಲೆಯ ಕಾರಂಜಾ ಜಲಾಶಯ ಯೋಜನೆಯ ಸಂತ್ರಸ್ತರಿಗೆ ಬಾಕಿಯಿರುವ ವೈಜ್ಞಾನಿಕ ಪರಿಹಾರ ಮತ್ತು ವಿಶೇಷ ಪ್ಯಾಕೇಜ್ ಘೋಷಿಸುವ ಕುರಿತು **ಪ್ರಸ್ತಾಪಿಸುವುದು. (ಮಾನ್ಯ ಉಪ ಮುಖ್ಯಮಂತ್ರಿಗಳು)**

...4

## 5. ವಿತ್ತೀಯ ಕಾರ್ಯಕಲಾಪ

2026-27ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ.

**ಐದನೇ ದಿನ**

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ
ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
www.kla.kar.nic.in/council/council.htm